ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಸಿಸಿ 6411/2021

| | | |
|---|---|---|
| ಸಾಕ್ಷಿದಾರರ ಹೆಸರು | – ಅರುಣ್ ಕುಮಾರ್ | ಚಾಸಾ–6 |
| ತಂದೆಯ ಹೆಸರು | – ರಾಮೇಗೌಡ | ಫ್ರಾಸಾ–7 |
| ವಯಸ್ಸು | – 39 ವರ್ಷ | |
| ಉದ್ಯೋಗ | – ಡ್ರೈವರ್ | |
| ವಾಸಸ್ಥಳ | – ಪಟ್ಲೂರು, ಚನ್ನಪಟ್ಟಣ ತಾಃ | |

ದಿನಾಂಕಃ– 04–07–2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎಪಿಪಿ ರವರಿಂದಃ–**

ಸಾಕ್ಷಿಗೆ ನಿ.ಪಿ– 7 ರಲ್ಲಿರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರೀ ಸಹಿಯನ್ನು ನಿ.ಪಿ. 7(ಸಿ) ಎಂದು, ನಾನು ನಿ.ಪಿ–7 ಕ್ಕೆ ಚನ್ನಪಟ್ಟಣದ ಪೋಲೀಸ್ ಠಾಣೆಯಲ್ಲಿ ಮಧ್ಯಾಹ್ನದ ಸಮಯದಲ್ಲಿ ಮಾಡಿರುತ್ತೇನೆ. ನನ್ನ ಜೊತೆ ಬೋರೇಗೌಡ ಎಂಬುವವರು ಸಹ ಮಾಡಿರುತ್ತಾರೆ, ನಿ.ಪಿ. 7 ರಲ್ಲಿ ಏನು ಬರೆದಿರುತ್ತದೆಯೆಂದು ನನಗೆ ಗೊತ್ತಿರುವುದಿಲ್ಲ. ನಿ.ಪಿ. 7 ರ ಸಮಯದಲ್ಲಿ ಈಗ ನ್ಯಾಯಾಲಯದಲ್ಲಿ ವಿಸಿ ಮುಖಾಂತರ ಹಾಜರಿರುವ ಆರೋಪಿಯನ್ನು ನೋಡಿರುವುದಿಲ್ಲ ಹಾಗೂ ಪೋಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ವಸ್ತುಗಳನ್ನು ಪೋಲೀಸರು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ-**

ದಿನಾಂಕಃ 04.01.2020 ರಂದು ಬೆಳಗ್ಗೆ 11.00 ರಿಂದ 12.00 ಗಂಟೆ ಸಮಯದಲ್ಲಿ ಆರೋಪಿತನಾದ ವಿಷ್ಣು ಮತ್ತು ಆಕಾಶ್ ಎಂಬುವವರು ಕಳ್ಳತನ ಮಾಡಿಕೊಂಡು ಬಂದಿದ್ದ ಮೊಬೈಲ್ ಗಳನ್ನು ಚನ್ನಪಟ್ಟಣ ಪೋಲೀಸ್ ಠಾಣೆಯಲ್ಲಿ ನನ್ನ ಮತ್ತು ಚಾ.ಸಾ–7 ರವರ ಸಮಕ್ಷಮ ಅಮಾನತ್ತು ಮಹಜರ್ ಮುಖಾಂತರ ಪೋಲೀಸರು ವಶಕ್ಕೆ ಪಡೆದುಕೊಂಡಿದ್ದು, ಅದಕ್ಕೆ ಸಂಬಂಧಪಟ್ಟಂತೆ ನಿ.ಪಿ–7 ರಂತೆ ಮಹಜರ್ ಕ್ರಮವನ್ನು ಜರುಗಿಸಿದ್ದರು ಎಂದರೆ ಸರಿಯಲ್ಲ, ಸದರೀ ಸಮಯದಲ್ಲಿ ಅರೋಪಿತ ಮತ್ತು ಆಕಾಶ್ ಎಂಬ ವ್ಯಕ್ತಿ ಠಾಣೆಯಲ್ಲಿ ಹಾಜರಿದ್ದರು ಎಂದರೆ ಸರಿಯಲ್ಲ. ಈ ಮೇಲೆ ಹೇಳಿದ ರೀತಿ ನಾನು ಹೇಳಿಕೆಯನ್ನು ಸಹ ಪೋಲೀಸರ ಮುಂದೆ ನೀಡಿದ್ದೇನೆಂದರೆ ಸರಿಯಲ್ಲ. ಸದರೀ

ಹೇಳಿಕೆಯನ್ನು ನಿ.ಪಿ-13 ಎಂದು ಗುರುತಿಸಲಾಯಿತು. ನಿ.ಪಿ-13 ರಲ್ಲಿರುವ ಎಲ್ಲಾ ವಿಚಾರಗಳು ನನಗೆ ತಿಳಿದಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

ಒಂದನೇ ಅಪರ ಸಿವಿಲ್ ಮತ್ತು ಜೆಎಂಎಫ್,ಸಿ,

ನ್ಯಾಯಾಧೀಶರು, ಮದ್ದೂರು.

ಸಾಕ್ಷಿಯ ಸಹಿಃ